ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 17–10–2017

***ಪತ್ರಿಕಾ ಪ್ರಕಟಣೆ***

**ಸಂಖ್ಯೆ:199 /319**

# ಧ್ವನಿ ಹೀನರ ದನಿಯಾಗಿ ಮಾಧ್ಯಮಗಳು ಕಾರ್ಯ ನಿರ್ವಹಿಸಬೇಕು – ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಅಕ್ಟೋಬರ್ 17( ಕರ್ನಾಟಕ ವಾರ್ತೆ) :

ಸಮಾಜದಲ್ಲಿ ಧ್ವನಿ ಹೀನರಾಗಿ ತುಳಿತಕ್ಕೆ ಒಳಗಾದವರ ಜನರ ದನಿಯಾಗಿ ಮಾಧ್ಯಮಗಳು ಕಾರ್ಯನಿರ್ವಹಿಸಬೇಕು, ಮಾಧ್ಯಮವನ್ನು ಸಂವಿಧಾನದ ನಾಲ್ಕನೆ ಅಂಗ ಎಂದು ಕರೆಯಲಾಗುತ್ತಿದ್ದು ಸಮ ಸಮಾಜವನ್ನು ನಿರ್ಮಿಸುವಲ್ಲಿ ಮಾಧ್ಯಮದ ಪಾತ್ರ ದೊಡ್ಡದು ಎಂದು ಮುಖ್ಯಮಂತ್ರಿ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಇಂದು ಖಾಸಗಿ ಹೋಟೆಲ್‌ನಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ "ಸಮರ್ಥ ಆಡಳಿತಕ್ಕೆ ಮಾಧ್ಯಮದ ಜೊತೆ ಜನರೆಡೆಗೆ" ವಿಷಯ ಕುರಿತು ಒಂದು ದಿನದ ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ ಜನಸಾಮಾನ್ಯರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವುದು, ಸರ್ಕಾರ ಚುನಾವಣಾ ಸಮಯದಲ್ಲಿ ಪ್ರಣಾಳಿಕೆ ಮೂಲಕ ನೀಡಿದ ಭರವಸೆಗಳ ಕುರಿತು ಕೈಗೊಂಡ ಕ್ರಮಗಳನ್ನು ಫಾಲೋ ಮಾಡುವಂತಹ ಕಾರ್ಯಕ್ಕೆ ಮಾಧ್ಯಮಗಳು ಹೆಚ್ಚಿನ ಒತ್ತು ನೀಡಿದಲ್ಲಿ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದರು.

ಪ್ರಜಾಪ್ರಭುತ್ವದಲ್ಲಿ ಜನಸಾಮಾನ್ಯರೆ ಮಾಲೀಕರು. ಸರ್ಕಾರ ಜನರಿಗೆ ಉತ್ತರದಾಯಿತ್ವ ಆಗಿರಬೇಕು, ರಾಜಕಾರಣಿಗಳು ಜನರಿಗೆ ಮತ್ತು ಸರ್ಕಾರಕ್ಕೆ ಜವಾಬ್ದಾರರು. ಸರ್ಕಾರಗಳ ಜವಾಬ್ದಾರಿ ಮತ್ತು ಭ್ರಷ್ಟಾಚಾರವನ್ನು ಮಾಧ್ಯಮಗಳು ಎತ್ತಿ ತೋರಿಸಬೇಕು.

ಸಾಮಾಜಿಕ ತಾರತಮ್ಯಕ್ಕೆ ಐತಿಹಾಸಿಕ ಕಾರಣಗಳಿವೆ, ಸಂವಿಧಾನದ ಮುಖ್ಯ ಆಶಯ ಸಮಸಮಾಜ ನಿರ್ಮಾಣ, ಕೇಂದ್ರ ಅಥವಾ ರಾಜ್ಯ ಸರ್ಕಾರ ಯಾವುದೇ ಆಗಿರಲಿ ಸಂವಿಧಾನದ ಆಶಯಕ್ಕೆ ತಕ್ಕಂತೆ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಸರ್ಕಾರದ ಮುಖ್ಯ ಕಾರ್ಯದರ್ಶಿ ಸುಭಾಶ್‌ಚಂದ್ರ ಕುಂಟಿಆ ಅವರು ಮಾತನಾಡಿ ಇಂದಿನ ಮಾಧ್ಯಮಗಳಲ್ಲಿ ಸೋಶಿಯಲ್ ಮಾಧ್ಯಮ ಅತ್ಯಂತ ಪ್ರಭಾವಿ ಮಾಧ್ಯಮವಾಗಿದ್ದು ಅತಿ ಹೆಚ್ಚು ಜನರಿಗೆ ತಲುಪುತ್ತದೆ. ಸೋಶಿಯಲ್ ಮೀಡಿಯಾದಲ್ಲಿ ಜನಸಾಮಾನ್ಯರು ಮತ್ತು ಮಾಧ್ಯಮ ಎರಡಕ್ಕೂ ಮಾತನಾಡುವ ಹಕ್ಕಿದೆ. ಜನರು ನೇರವಾಗಿ ತಮ್ಮ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರಬಹುದು. ಸೋಶಿಯಲ್ ಮೀಡಿಯಾ ಪಾತ್ರವನ್ನು ಪರಿಗಣಿಸಿ ಪ್ರತಿ ಇಲಾಖೆಯಲ್ಲಿ ಪ್ರತ್ಯೇಕ ಸೋಶಿಯಲ್ ಮೀಡಿಯಾ ವಿಭಾಗವನ್ನು ತೆರೆಯಲು ಯೋಜಿಸಲಾಗಿದ್ದು, ಇದಕ್ಕಾಗಿ ನೋಡೆಲ್ ಅಧಿಕಾರಿಗಳನನ್ನು ನೇಮಿಸಲು ಸೂಚಿಸಲಾಗಿದೆ. ಸೋಶಿಯಲ್ ಮೀಡಿಯಾದಲ್ಲಿ ಸುಳ್ಳು ಸುದ್ದಿಗಳ ಬಗ್ಗೆ ಸಾರ್ವಜನಿಕರು ಎಚ್ಚರ ವಹಿಸಬೇಕ, ಇಲಾಖೆಗಳು ನೀಡುವ ಸುದ್ದಿಗಳು ನಿಖರವಾಗಿರುತ್ತವೆ ಎಂದು ಹೇಳಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮಣಿವಣ್ಣನ್ ಅವರು ಮಾತನಾಡಿ ಸರ್ಕಾರದ ವಿವಿಧ ಯೋಜನೆಗಳ ಕುರಿತು ಮಾಹಿತಿಯನ್ನು ಜನರೊಂದಿಗೆ ನೇರವಾಗಿ ಹಂಚಿಕೊಳ್ಳುವ ಅವಕಾಶ ಇರುವುದು ಸೋಶಿಯಲ್ ಮೀಡಿಯಾದಲ್ಲಿ ಮಾತ್ರ. ಅದೇ ರೀತಿ ಜನಸಾಮಾನ್ಯರು ಸಹ ತಮ್ಮ ಸಮಸ್ಯೆಗಳನ್ನು ನೇರವಾಗಿ ಅಧಿಕಾರಿಗಳ ಅಥವಾ ಸರ್ಕಾರದ ಗಮನಕ್ಕೆ ತರುವ ಅವಕಾಶವಿದೆ, ಸಮಸ್ಯೆಗಳಿಗೆ ವೇಗವಾಗಿ ಪರಿಹಾರವನ್ನು ಕಂಡುಕೊಳ್ಳಬಹುದು ಎಂದು ಹೇಳಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಡಾ: ಹರ್ಷ ಪಿ.ಎಸ್. ಅವರು ಮಾತನಾಡಿ ನಮ್ಮ ಇಲಾಖೆ ಸರ್ಕಾರ ಮತ್ತು ಜನಸಾಮಾನ್ಯರ ನಡುವೆ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತಿದೆ. ವಿವಿಧ ರೀತಿಯ ಮಾಧ್ಯಮಗಳನ್ನು ಬಳಸಿಕೊಂಡು ಸರ್ಕಾರಿ ಯೋಜನೆಗಳ ಪ್ರಚಾರ ಮತ್ತು ಮಾಹಿತಿ ಕಾರ್ಯವನ್ನು ನಿರ್ವಹಿಸುತ್ತಿರುವ ಇಲಾಖೆ ಸೋಶಿಯಲ್ ಮೀಡಿಯಾ ಬೆಳವಣಿಗೆ, ವೇಗ ಮತ್ತು ಪರಿಣಾಮವನ್ನು ಗಮನಿಸಿ ಇಲಾಖೆಯಲ್ಲಿ ಇತ್ತೀಚೆಗೆ ಪ್ರತ್ಯೇಕ ಸೋಶಿಯಲ್ ಮೀಡಿಯಾ ವಿಭಾಗವನ್ನು ತೆರೆಯಲಾಗಿದೆ. ಯೋಜನೆಗಳ ಮಾಹಿತಿ, ಸಾಧನೆ ಹಾಗೂ ಹೆಚ್ಚಿನ ಮಾಹಿತಿಯನ್ನು ಕುರಿತು ಸೋಶಿಯಲ್ ಮೀಡಿಯಾ ಮುಖಾಂತರ ನೀಡಲಾಗುತ್ತಿದೆ. ಇದೊಂದು ನೇರ ಮತ್ತು ಪರಿಣಾಮಕಾರಿ ಮಾಧ್ಯಮವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಔಟ್‌ಲುಕ್ ಪತ್ರಿಕೆಯ ಮಾಜಿ ಸಂಪಾದಕ ಕೃಷ್ಣ ಪ್ರಸಾದ್, ಮಾಧ್ಯಮ ಅಕಾಡೆಮಿ ಅಧ್ಯಕ್ಷ ಸಿದ್ದರಾಜು ಸೇರಿದಂತೆ ಸರ್ಕಾರದ ಹಿರಿಯ ಅಧಿಕಾರಿಗಳು, ಜನಪ್ರತಿನಿಧಿಗಳು, ಮಾಧ್ಯಮ ಸಂಸ್ಥೆಯ ಮುಖ್ಯಸ್ಥರು, ವಿವಿಧ ಇಲಾಖೆಗಳ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು ಹಾಗೂ ಪತ್ರಕರ್ತರು ಉಪಸ್ಥಿತರಿದ್ದರು.

**ಸಂಖ್ಯೆ:200 /320**

# ರಾಜ್ಯಪಾಲರಿಂದ ದೀಪಾವಳಿ ಶುಭಾಷಯ

ಬೆಂಗಳೂರು, ಅಕ್ಟೋಬರ್ 17( ಕರ್ನಾಟಕ ವಾರ್ತೆ) :

ಕರ್ನಾಟಕ ರಾಜ್ಯಪಾಲ ವಜುಭಾಯಿ ವಾಲಾ ಅವರು ದೀಪಾವಳಿ ಶುಭ ಸಂದರ್ಭದಲ್ಲಿ ಕರ್ನಾಟಕದ ಜನತೆಗೆ ಶುಭಾಷಯ ತಿಳಿಸಿದ್ದಾರೆ. ದೀಪಾವಳಿಯು ನಾಡಿನ ಜನತೆಗೆ ಸುಖ ಸಂತೋಷ, ಸಮೃದ್ಧಿ ಮತ್ತು ಉತ್ತಮ ಆರೋಗ್ಯ ವೃದ್ಧಿಸಲಿ ಎಂದು ಹಾರೈಸಿದ್ದಾರೆ.

**ಸಂಖ್ಯೆ:201 /321**

# ಅರ್ಹತಾ ಪಟ್ಟಿ ಪ್ರಕಟ

ಬೆಂಗಳೂರು, ಅಕ್ಟೋಬರ್ 17 ( ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 7-5-2017 ರಂದು ನಡೆಸಿದ ಅಬಕಾರಿ ಇಲಾಖೆಯಲ್ಲಿನ 51 ಅಬಕಾರಿ ರಕ್ಷಕರು (ಮಹಿಳೆ) ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳ ಅರ್ಹತೆಯ ಆಧಾರದ ಮೇಲೆ ಹಾಗೂ ಅವರ ಮೀಸಲಾತಿಗಳಿಗೆ ಅನುಗುಣವಾಗಿ 1:5 ರ ಅನುಪಾತದಲ್ಲಿ ಅರ್ಹರಾದ ಅಭ್ಯರ್ಥಿಗಳ ಹೆಸರು/ನೋಂದಣಿ ಸಂಖ್ಯೆಯುಳ್ಳ ಅರ್ಹತಾ ಪಟ್ಟಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ.

ಈ ಅಭ್ಯರ್ಥಿಗಳ ದೇಹ ದಾರ್ಢ್ಯ ಮತ್ತು ಸಾಮರ್ಥ್ಯ ಪರೀಕ್ಷೆ ನಡೆಸಲು ಜಿಲ್ಲಾವಾರು ಅರ್ಹತಾ ಪಟ್ಟಿಯನ್ನು ಅಬಕಾರಿ ಆಯುಕ್ತರಿಗೆ ಕಳುಹಿಸಿಕೊಡಲಾಗುವುದು. ಈ ಬಗ್ಗೆ ಅಭ್ಯರ್ಥಿಗಳಿಗೆ ಸಂಬಂಧಿತ ಪ್ರಾಧಿಕಾರಿಗಳಾದ ಪ್ರತಿ ಜಿಲ್ಲೆಯ ಅಬಕಾರಿ ಉಪ ಆಯುಕ್ತರಿಂದ ವೈಯಕ್ತಿಕವಾಗಿ ದೇಹ ದಾರ್ಢ್ಯ ಪರೀಕ್ಷೆಗೆ ಹಾಜರಾಗಲು ಸೂಚನಾ ಪತ್ರಗಳನ್ನು ಕಳುಹಿಸಿಕೊಡಲಾಗುವುದು.

ಸೂಚನಾ ಪತ್ರ ಸ್ವೀಕೃತವಾದ ನಂತರ ದೇಹದಾರ್ಢ್ಯ ಪರೀಕ್ಷೆಗೆ ಹಾಜರಾಗುವಂತೆ ಸಂಬಂಧಿತ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ;ಜೆಡಿ:ಜಿಪಿಆರ್.

ಸಂಖ್ಯೆ:202 /322

## ನಗರದಲ್ಲಿ "ಉದ್ಯೋಗ ಮೇಳ"

ಬೆಂಗಳೂರು, ಅಕ್ಟೋಬರ್ 17 ( ಕರ್ನಾಟಕ ವಾರ್ತೆ) :

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಖಾಸಗಿ ನಿಯೋಜಕರುಗಳ ಸಂಯುಕ್ತ ಆಶ್ರಯದಲ್ಲಿ ನಿರುದ್ಯೋಗ ಯುವಕ / ಯುವತಿಯರಿಗೆ ನೇರ ಸಂದರ್ಶನಕ್ಕೆ ಅನುಕೂಲವಾಗುವಂತೆ ಅಕ್ಟೋಬರ್ 26 ರ ಗುರುವಾರ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 4.00 ಗಂಟೆಯವರೆಗೆ ಸರ್ಕಾರಿ ವಿಜ್ಞಾನ ಕಾಲೇಜು, ನೃಪತುಂಗ ರಸ್ತೆ, ಬೆಂಗಳೂರು – 560 001 ಇಲ್ಲಿ ಉದ್ಯೋಗ ಮೇಳ" ವನ್ನು ಹಮ್ಮಿಕೊಳ್ಳಲಾಗಿದೆ.

ಈ ಉದ್ಯೋಗ ಮೇಳದಲ್ಲಿ ಖಾಸಗಿ ವಲಯದ 40 ಕ್ಕೂ ಹೆಚ್ಚು ಹೆಸರಾಂತ ಸಂಸ್ಥೆಗಳು ಭಾಗವಹಿಸುತ್ತಿದ್ದು, ವಿವಿಧ ತಾಂತ್ರಿಕ ಹಾಗೂ ತಾಂತ್ರಿಕೇತರ ಹುದ್ದೆಗಳಿಗೆ ಸ್ಥಳದಲ್ಲೇ ನೇರವಾಗಿ ಆಯ್ಕೆ ಮಾಡಲಿದ್ದಾರೆ.

ಅಕ್ಷರಸ್ಥರು, ಅರ್ಧದಲ್ಲಿಯೇ ಶಾಲೆ ಬಿಟ್ಟವರು ಹಾಗೂ ಎಸ್.ಎಸ್.ಎಲ್.ಸಿ. ಫೇಲ್, ಎಸ್.ಎಸ್. ಎಲ್.ಸಿ. ಪಾಸ್, ಪಿ.ಯು.ಸಿ. ಐ.ಟಿ.ಐ ಮತ್ತು ಡಿಪ್ಲೋಮಾ (ಎಲ್ಲಾ ಟ್ರೇಡ್‌ಗಳು) ಮತ್ತು ಪದವೀಧರರು ಹಾಗೂ ಸ್ನಾತಕೋತ್ತರ ಪದವಿ ಹೊಂದಿದವರಿಗೆ ಉದ್ಯೋಗ ಅವಕಾಶಗಳು ಲಭ್ಯವಿದೆ. ಉದ್ಯೋಗಾಕಾಂಕ್ಷಿಗಳು ತಮ್ಮ ವೈಯಕ್ತಿಕ (ಬಯೋಡಾಟಾ) ವಿವರಗಳೊಂದಿಗೆ "ಉದ್ಯೋಗ ಮೇಳ" ದಲ್ಲಿ ಭಾಗವಹಿಸಿ ಉದ್ಯೋಗ ದೊರೆಯುವ ಸದಾವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿ ಹಾಗೂ ವಿವರಗಳಿಗಾಗಿ ದೂರವಾಣಿ ಸಂಖ್ಯೆ 22289668. 22261184, 22374582, 22268846 ಹಾಗೂ 22259351 ಸಂಪರ್ಕಿಸಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ:203 /323

# ಉಪನ್ಯಾಸಕರ ಅರ್ಹತಾ ಪಟ್ಟಿ ಪ್ರಕಟ

ಬೆಂಗಳೂರು, ಅಕ್ಟೋಬರ್ 17 ( ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗವು ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿನ ಆಂಗ್ಲ ಭಾಷಾ ಉಪನ್ಯಾಸಕರ 23 + 03 (ಹೈ.ಕ.) ಗಣಿತ ಐಚ್ಛಿಕ ವಿಷಯ ಉಪನ್ಯಾಸಕರ 23 + 03 (ಹೈ.ಕ) ಜೀವಶಾಸ್ತ್ರ ಐಚ್ಛಿಕ ವಿಷಯ ಉಪನ್ಯಾಸಕರ 23 = 03 (ಹೈ.ಕ) ಹಾಗೂ ಗಣಕಯಂತ್ರ ವಿಜ್ಞಾನ ಉಪನ್ಯಾಸಕರ 23+03 (ಹೈ.ಕ) ಹುದ್ದೆಗಳಿಗೆ ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ, ಮೂಲ ದಾಖಲೆಗಳ ಪರಿಶೀಲನಾ ಕಾರ್ಯವನ್ನು ದಿನಾಂಕ 30-10-2017 ಮತ್ತು 31-10-2017 ರಂದು ನಡೆಸಲು ತೀರ್ಮಾನಿಸಲಾಗಿದೆ.

ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಈಗಾಗಲೇ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದ್ದು, ಅಭ್ಯರ್ಥಿಗಳು ತಮ್ಮ ರಿಜಿಸ್ಟ್ರೇಷನ್ ನಂ ನಮೂದಿಸಿ ಆಯೋಗದ ಅಂತರ್ಜಾಲ http://kpsc.kar.nic.in ದಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯ ವಾಣಿ ಸಂಖ್ಯೆ 8951107408 ಅನ್ನು ಸಂಪರ್ಕಿಸಬಹುದಾಗಿದೆ.

ಎಸ್‌ಎಂ;ಜೆಡಿ:ಜಿಪಿಆರ್.

ಸಂಖ್ಯೆ:204 /324

# ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮದಲ್ಲಿ ತಿಂಗಳ ಅತಿಥಿಯಾಗಿ ಡಾ. ಎಂ. ವೀರಪ್ಪ ಮೊಯ್ಲಿ

ಬೆಂಗಳೂರು, ಅಕ್ಟೋಬರ್ 17 ( ಕರ್ನಾಟಕ ವಾರ್ತೆ) :

ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ಅಕ್ಟೋಬರ್ 21 ರ ಶನಿವಾರದಂದು ಸಂಜೆ 4.00 ಗಂಟೆಗೆ ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು ಇಲ್ಲಿ ಹಮ್ಮಿಕೊಳ್ಳಲಾಗಿರುವ ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮದಲ್ಲಿ ತಿಂಗಳ ಅತಿಥಿಯಾಗಿ ಸಾಹಿತಿಗಳು ಮತ್ತು ಹಿರಿಯ ರಾಜಕೀಯ ಧುರೀಣರು ಹಾಗೂ ರಾಜ್ಯದ ಮಾಜಿ ಮುಖ್ಯಮಂತ್ರಿ ಡಾ. ಎಂ. ವೀರಪ್ಪ ಮೊಯ್ಲಿ ಅವರು ಪಾಲ್ಗೊಳ್ಳಲಿದ್ದಾರೆ.

ಎಸ್‌ಎಂ;ಜೆಡಿ:ಜಿಪಿಆರ್.

**ಸಂಖ್ಯೆ:205 /325**

## ಕೀ ಉತ್ತರ ಪ್ರಕಟ

ಬೆಂಗಳೂರು, ಅಕ್ಟೋಬರ್ 17 ( ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗವು 15-3-2017 ರ ಅಧಿಸೂಚನೆ ಮತ್ತು ದಇನಾಂಕ 15-04-2017 ರ ಸೇರ್ಪಡೆ ಅಧಿಸೂಚನೆಗಳಲ್ಲಿ ಅಧಿಸೂಚಿಸಲಾದ ಹುದ್ದೆಗಳಲ್ಲಿ ಪದವಿಪೂರ್ವ ವಿದ್ಯಾರ್ಹತೆ ಹೊಂದಿರುವ ಎಲ್ಲಾ ತಾಂತ್ರಿಕೇತರ ಗ್ರೂಪ್ ಸಿ ಹುದ್ದೆಗಳ ಸವರ್ಧಾತ್ಮಕ ಪರೀಕ್ಷೆಯನ್ನು ದಿ: 11-6-2017 ರಂದು ಸ್ವರ್ಧಾತ್ಮಕ ಪರೀಕ್ಷೆಯನ್ನು ನಡೆಸಿ, ಕೀ ಉತ್ತರಗಳನ್ನು ದಿನಾಂಕ 17-72017 ರಂದು ಮತ್ತು ಪದವಿ ವಿದ್ಯಾರ್ಹತೆ ಹೊಂದಿರುವ ಎಲ್ಲಾ ತಾಂತ್ರಿಕೇತರ ಗ್ರೂಪ್ ಸಿ ಹುದ್ದೆಗಳ ಸ್ವರ್ಧಾತ್ಮಕ ಪರೀಕ್ಷೆಯನ್ನು ದಿ: 4-6-2017 ನಡೆಸಿ, ಕೀ ಉತ್ತರಗಳನ್ನು ದಿ: 3-7-2017 ರಂದು ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿತ್ತು. ಪ್ರಸ್ತುತ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಿ ಪರಿಷ್ಕೃತ ಕೀ ಉತ್ತರಗಳನ್ನು ದಿ: 16-10-2017 ರಂದು ಆಯೋಗದ ವೆಬ್‌ಸೈಟ್ http://kpsc.kar.nic.in/Key answers ಪ್ರಕಟಿಸಲಾಗಿದೆ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.

**ಸಂಖ್ಯೆ:206 /326**

## ದೀಪಾವಳಿ ಶುಭಾಷಯ

ಬೆಂಗಳೂರು, ಅಕ್ಟೋಬರ್ 17( ಕರ್ನಾಟಕ ವಾರ್ತೆ) :

ಕರ್ನಾಟಕ ವಿಧಾನ ಪರಿಷತ್ತಿನ ಉಪ ಸಭಾಪತಿ ಅವರು ದೀಪಾವಳಿ ಶುಭ ಸಂದರ್ಭದಲ್ಲಿ ಕರ್ನಾಟಕದ ಜನತೆಗೆ ಸುಖ ಸಂತೋಷ, ಸಮೃದ್ಧಿ ಮತ್ತು ನೆಮ್ಮದಿ ತರಲಿ ಎಂದು ಹಾರೈಸಿದ್ದಾರೆ.